**ದಿನಾಂಕ: 16.07.2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 180 ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾಡ್ 180 ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶಿವರುದ್ರಯ್ಯ – ಹಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
4. ಶ್ರೀಮತಿ. ಅಂಬಿಕ – ಕಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
5. ಶ್ರೀ. Syed Muiez – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 180 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯಲ್ಲಿ ಕಸ ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆ ಉಂಟಾಗಿರುತ್ತದೆ ಎಂದು ಸಾರ್ವಜನಿಕರು ದೂರಿ ನೀಡಿದ ಮೇರೆಗೆ ಸದರಿ ಕಸವನ್ನು ನಿಲೇವಾರಿ ಮಾಡಿ ಸ್ವಚ್ಚಗೊಳಿಸಲಾಗಿದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯ ಗಂಗಾಧರನಗರದಲ್ಲಿರುವ ಆರ್ ಆರ್ ಆಸ್ಪತ್ರೆಯ ಕಟ್ಟಡದ ಮುಂಭಾಗದ ಚರಂಡಿಯುಲ್ಲಿ ವ್ಯತ್ಯಾಸವಾಗಿರುವುದರಿಂದ ಪಕ್ಕದ ಮನೆಯ ಚರಂಡಿಯು ತುಂಬಿರುತ್ತದೆ ಎಂದು ಬಂದ ದೂರಿನ ಹಿನ್ನಲೆಯಲ್ಲಿ ಸದರಿ ಚರಂಡಿಯಲ್ಲಿ ಹೂಳು ತೆಗೆದು ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ಥೆ ಮಾಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ಉಮಾರ್‌ಭಾಗ್ ಲೇಔಟ್ ಮುಖ್ಯರಸ್ತೆಯಲ್ಲಿರುವ ಖಾಲಿ ಸೈಟ್‌ನ ಮುಂಭಾಗದಲ್ಲಿರುವ ಚರಂಡಿಯಲ್ಲಿ ಹೂಳು ತುಂಬಿದ್ದು ಸದರಿ ಚರಂಡಿಯಲ್ಲಿ ಹರಿಯುವ ನೀರು ರಸ್ತೆಯಲ್ಲಿ ಹರಿಯುತಿದ್ದು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಸದರಿ ಚರಂಡಿಯಲ್ಲಿ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ಟೀಚರ್ಸ್ ಕಾಲೋನಿಯ 6ನೇ ಅಡ್ಡರಸ್ತೆಯು ತುಂಬಾ ಹಾಳಾಗಿದ್ದು ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿರುತ್ತದೆ. ಆದ್ದರಿಂದ ಸದರಿ ರಸ್ತೆಗೆ ಡಾಮಬರೀಕರಣ ಮಾಡಿಕೊಡುವಂತೆ ಸಾರ್ವಜನಿಕರು ಕೋರಿರುತ್ತಾರೆ. ಅದರಂತೆ ಸದರಿ ರಸ್ತೆಗೆ ಡಾಂಬರೀಕರಣ ಮಾಡಲಾಗಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ಗಂಗಾಧರನಗರ ಕನಕಪುರ ರಸ್ತೆಯ ಚರಂಡಿಯು ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದ ಮೇರೆಗೆ ರಸ್ತೆ ಮತ್ತು ಮೂಲಭೂತ ಸೌಕರ್ಯ ರವರು ಸದರಿ ಚರಂಡಿಯನ್ನು ಸರಿಪಡಿಸಲಾಗಿರುತ್ತದೆ ಎಂದು ತಿಳಿಸಿದರು.

ಸರಬಂಡೆಪಾಳ್ಯದ ಗಂಗಮ್ಮ ದೇವಸ್ಥಾನ ರಸ್ತೆಯಲ್ಲಿ ಮ್ಯಾನ್ ಹೋಲ್‌ನಲ್ಲಿ ನೀರು ತುಂಬಿ ರಸ್ತೆಯಲ್ಲಿ ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿರುತ್ತಾರೆ. ಅದರಂತೆ ಸದರಿ ಮ್ಯಾನ್‌ಹೋಲ್‌ಅನ್ನು ಸ್ವಚ್ಚಗೊಳಿಸಲಾಗಿರುತ್ತದೆ ಎಂದು ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ಸೂಚಿಸಿಲಾಯಿತು.

ಟೀಚರ್ಸ್ ಕಾಲೋನಿ 4ನೇ ಅಡ್ಡರಸ್ತೆಯಲ್ಲಿ ಕುಡಿಯುವ ನೀರಿನ ವಾಲ್ ತೊಂದರೆಯಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ರವರು ಸರಿಪಡಿಸಲಾಗಿರುತ್ತದೆ ಎಂದು ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಚಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Satish kumar

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 180
ಬನಶಂಕರಿ ದೇವಸ್ಥಾನ